ಆ) ಬೈಲಹೊಂಗಲ ತಾಲ್ಲೂಕಿನಲ್ಲಿ ಕೆಂಗಾನೂರು ಗ್ರಾಮದಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡದ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯವನ್ನು ಪ್ರಾರಂಭಿಸುವ ಪ್ರಸ್ತಾವನೆ ಬಂದಾಗ ಇತರೆ ಪ್ರಸ್ತಾವನೆಗಳೊಂದಿಗೆ ಆದ್ಯತೆ, ಅವಶ್ಯಕತೆ ಹಾಗೂ ಹಣದ ಲಭ್ಯತೆಯೊಂದಿಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಬೆಳಗಾವಿ ಜಿಲ್ಲೆ ಮುರ್ಕಿಭಾವಿ ಗ್ರಾಮದಲ್ಲಿ ಬಿ.ಸಿ.ಎಂ. ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ಪ್ರಾರಂಭ

1594 (1394) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಮುರ್ಕಿಭಾವಿ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆ ಇರುವ ಸಂಗತಿ ನಿಜವೇ;

ಆ) ಹಾಗಿದ್ದಲ್ಲಿ ಅಲ್ಲಿನ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಬೈಲಹೊಂಗಲ ತಾಲ್ಲೂಕಿನ ಮುರ್ಕಿಭಾವಿ ಗ್ರಾಮದಲ್ಲಿ ಬಿ.ಸಿ.ಎಂ. ಬಾಲಕರ ಮೆಟ್ರಿಕ್ ಪೂರ್ವ ವಸತಿ ನಿಲಯವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) 2002-2003ನೇ ಸಾಲಿನಲ್ಲಿ ಹೊಸ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಇರುವುದಿಲ್ಲ.

ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ

1596 (2045) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸರ್ಕಾರದ ಯಾವ ಯಾವ ಇಲಾಖೆಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳು ಖಾಲಿ ಇವೆ;

ಆ) ಸರ್ಕಾರ ಕಳೆದ 6 ತಿಂಗಳುಗಳಿಂದ ಎಷ್ಟು ಇಲಾಖೆಗಳಲ್ಲಿ ಖಾಲಿ ಇದ್ದ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ (ವಿವರ ನೀಡುವುದು)

ಇ) ಬಾಕಿ ಇರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಈ) ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಾಗ ಸರ್ಕಾರ ಅನುಸರಿಸುವ ಮಾನದಂಡನೆಗಳೇನು?

ಉ) ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ನಿಯಮಗಳನ್ನು ಪಾಲಿಸಿಲ್ಲ ಎಂಬ ದೂರುಗಳ ಬಗ್ಗೆ ಸರ್ಕಾರದ ವಿವರಣೆ ಏನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಆ) ಸರ್ಕಾರಿ ಇಲಾಖೆಗಳಲ್ಲಿ ಗುರುತಿಸಲಾಗಿರುವ ಒಟ್ಟು ಬ್ಯಾಕ್‌ಲಾಗ್ ಹುದ್ದೆಗಳು 11843 ಇಲ್ಲಿಯವರೆಗೆ 40 ಸರ್ಕಾರಿ ಇಲಾಖೆಗಳಲ್ಲಿ 3320 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಇ) ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬಲು ಸರ್ಕಾರ ವಿಶೇಷ ನೇಮಕಾತಿ ನಿಯಮಗಳನ್ನು ಒಳಗೊಂಡ ಅಧಿಸೂಚನೆಯನ್ನು ದಿನಾಂಕ 21-11-2001 ರಂದು ಹೊರಡಿಸಿದ್ದು ಈ ಪ್ರಕಾರ ನೇಮಕಾತಿ ಪ್ರಾಧಿಕಾರಿಗಳು ಕ್ರಮ ತೆಗೆದುಕೊಂಡಿರುತ್ತಾರೆ. ನೇಮಕಾತಿಯಲ್ಲಿ ಆಗಿರುವ ಪ್ರಗತಿ ಪರಿಶೀಲಿಸಲು ಮತ್ತು ಅಡಚಣೆಗಳ ಬಗ್ಗೆ ಚರ್ಚಿಸಿ ಸೂಕ್ತ ಮಾರ್ಗೋಪಾಯ ಸೂಚಿಸಲು ಸರ್ಕಾರವು ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಿದ್ದು ಈ ಸಮಿತಿಯ ಕಾಲ ಕಾಲಕ್ಕೆ 8 ಬಾರಿ ಸಭೆ ಸೇರಿ ಪರಿಶೀಲನೆ ನಡೆಸಿರುತ್ತದೆ. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಆಗಾಗ್ಗೆ ಕಾರ್ಯದರ್ಶಿಗಳ ಸಭೆಯಲ್ಲಿ ಈ ವಿಷಯ ಪರಿಶೀಲಿಸಿರುತ್ತಾರೆ. ಇದರ ಜೊತೆಗೆ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಸಾಧ್ಯವಿರುವ ಎಲ್ಲಾ ಕ್ರಮಗಳನ್ನು ಸರ್ಕಾರ ತೆಗೆದುಕೊಂಡಿದೆ. ಈ ಎಲ್ಲಾ ಕ್ರಮಗಳಿಂದ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಯ ಪ್ರಕ್ರಿಯೆ ಪರಿಣಾಮಕಾರಿಯಾಗಿ ನಡೆಯುತ್ತದೆ.

ಈ) ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಗಳನ್ನು ಜಾರಿಗೆ ತಂದಿದ್ದು, ಆ ಪ್ರಕಾರ 29 ರಿಂದ 40 ವಯೋಮಿತಿಗೆ ಒಳಪಟ್ಟ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಅಂತಹ ಅಭ್ಯರ್ಥಿಗಳು ಲಭ್ಯವಿಲ್ಲದೆ ಇದ್ದಲ್ಲಿ 18 ರಿಂದ 28 ವರೆಗಿನ ವಯಸ್ಸಿನ ಅಭ್ಯರ್ಥಿಗಳನ್ನು ಅಂಕಗಳ ಆಧಾರದ ಮೇಲೆ ಜೇಷ್ಠತಾ ಪಟ್ಟಿ ತಯಾರಿಸಿ ಪರಿಗಣಿಸಲಾಗುತ್ತದೆ.

ಉ) ಕೆಲವು ಅನುದಾನಿತ ಶಿಕ್ಷಣ ಸಂಸ್ಥೆ ನಿಗಮ ಮಂಡಳಿ ವಿಶ್ವವಿದ್ಯಾನಿಲಯಗಳಲ್ಲಿ ಈ ಮೇಲಿನ ನಿಯಮಗಳನ್ನು ಪಾಲಿಸುತ್ತಿಲ್ಲವೆಂಬ ದೂರುಗಳು ಬಂದಿದ್ದು ಆ ಬಗ್ಗೆ ಸೂಕ್ತ ಕ್ರಮ ತೆಗೆದುಕೊಂಡು ಸರ್ಕಾರದ ನಿಯಮದ ಪ್ರಕಾರವೇ ಆಯ್ಕೆ ಮಾಡಬೇಕೆಂದು ಸಂಬಂಧಪಟ್ಟವರಿಗೆ ಸೂಚನೆ ನೀಡಲಾಗಿದೆ ಇದನ್ನು ಉಲ್ಲಂಘಿಸುವವರು ಮೇಲೆ ಕ್ರಮ ಜರುಗಿಸಲಾಗುವುದು.

ತುರುವೇಕೆರೆ ತಾಲ್ಲೂಕು ಹನುಮಾಪುರ ಆಶ್ರಮ ಶಾಲೆಗೆ ಕಟ್ಟಡ ನಿರ್ಮಾಣ

1597 (2046) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ಮಾಯಸಂದ್ರ ಹೋಬಲಿ ಹನುಮಾಪುರ ಗ್ರಾಮದಲ್ಲಿ ಆಶ್ರಮ ಶಾಲೆ ಯಾವಾಗ ಪ್ರಾರಂಭ ಆಯಿತು;

ಆ) ಇಲ್ಲಿ ನಡೆಯುತ್ತಿರುವ ಆಶ್ರಯ ಶಾಲೆಯ ಕಟ್ಟಡ ಮಕ್ಕಳು ಓದುವ ಸ್ಥಿತಿಯಲ್ಲಿ ಇದೆಯೇ;

ಇ) ತುಂಬಾ ಹದಗೆಟ್ಟಿರುವ ಈ ಕಟ್ಟಡದ ಬದಲು ಹೊಸ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ಹಾಗಿದ್ದಲ್ಲಿ, ಈ ವರ್ಷದ ಆಯವ್ಯಯದಲ್ಲಿ ಅನುದಾನವನ್ನು ನೀಡುವುದೇ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ದಿನಾಂಕ 8-12-2001 ರಂದು ತುರುವೇಕೆರೆ ತಾಲ್ಲೂಕು ಮಾಯಸಂದ್ರ ಹೋಬಳಿ ಹನುಮಾಪುರ ಗ್ರಾಮದಲ್ಲಿ ಆಶ್ರಮ ಶಾಲೆಯನ್ನು ಪ್ರಾರಂಭಿಸಲಾಗಿದೆ.

ಆ) ಇಲ್ಲ.